ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 6/12/20


# ಶಾಸಕರ ಸಭೆಗೆ ಸಿಎಂ ಬಿಎಸ್‌ವೈ ನಿರ್ಧಾರ

ಬೆಂಗಳೂರು: ಶಾಸಕರು ಹಾಗೂ ಸಚಿವರ ನಡುವೆ ತೀವ್ರ ಭಿನ್ನಾಭಿಪ್ರಾಯ ಉಂಟಾ ಗಿರುವ ಕಾರಣ ಶೀಘ್ರದಲ್ಲೇ ಮುಖ್ಯ ಮಂತ್ರಿ ಬಿ.ಎಸ್.ಯಡಿಯೂರಪ್ಪ ಸಭೆ ಕರೆಯಲು ಮುಂದಾಗಿದ್ದಾರೆ.



ಮೂರು ದಿನಗಳ ಹಿಂದೆಯಷ್ಟೆ ವಿಧಾನಸಭೆಯ ಮುಖ್ಯ ಸಚೇತಕ ವಿ.ಸುನಿಲ್‌ಕುಮಾರ್ ಅವರು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್‌ಗೆ ಪತ್ರ ಬರೆದು ಸಭೆ ಕರೆಯಬೇಕೆಂದು ಮನವಿ ಮಾಡಿದ್ದರು. ಈ ವಿಷಯವಾಗಿ ಬೆಳಗಾವಿಗೆ ಆಗಮಿಸಿರುವ ನೂತನ ರಾಜ್ಯ ಉಸ್ತುವಾರಿ ಅರುಣ್‌ಸಿಂಗ್ ಅವರು ಶೀಘ್ರವೇ ಶಾಸಕರ ಸಭೆ ಕರೆದು ಚರ್ಚೆ ಮಾಡುವಂತೆ ನಿರ್ದೇಶನ ನೀಡಿದ್ದು, ಉಸ್ತುವಾರಿಯವರ ಸೂಚನೆಯಂತೆ ಅಧಿವೇಶನ ನಡೆಯುವ ಸಂದರ್ಭದಲ್ಲೇ ಶಾಸಕರು ಮತ್ತು ಸಚಿವರ ಸಭೆ ಕರೆದು ಅವರ ಸಮಸ್ಯೆಗಳನ್ನು ಯಡಿಯೂರಪ್ಪ ಅವರು ಆಲಿಸಲಿದ್ದಾರೆ ಎಂದು ತಿಳಿದುಬಂದಿದೆ.

ಪಕ್ಷದ ಮೂಲಗಳ ಪ್ರಕಾರ, ಅಧಿವೇಶನ ಆರಂಭವಾಗಿ ಎರಡು-ಮೂರು ದಿನಗಳ ನಂತರ ಯಡಿಯೂರಪ್ಪ ಸಭೆ ಕರೆದು ಶಾಸಕರು ಯಾವುದೇ ಪತ್ರ ಅಥವಾ ಮನವಿ ನೀಡಿದಾಗ ಪರಿಗಣಿಸಬೇಕೆಂದು ಸಚಿವರಿಗೆ ಸೂಚಿಸಲಿದ್ದಾರೆ ಎಂದು ಗೊತ್ತಾಗಿದೆ.